**Akashvani : Bangalore**
**Regional Bulletin In Kannada**
**02.09.2025 : 14.30hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

******

ಮುಖ್ಯಾಂಶಗಳು :

1. ಮೈಸೂರಿನ ಅರಮನೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ
2. ಸೌಜನ್ಯ ಸಾವಿನ ಮರು ತನಿಖೆಯ ತೀರ್ಮಾನ ಸೌಜನ್ಯ ಕುಟುಂಬಕ್ಕೆ ಸೇರಿದ್ದು- ಮುಖ್ಯಮಂತ್ರಿ ಸಿದ್ದರಾಮಯ್ಯ
3. ಮುಂದಿನ ಸಚಿವ ಸಂಪುಟದಲ್ಲಿ ನಾಗಮೋಹನ್ ದಾಸ್ ವರದಿ ಅಥವಾ ಮಾಧುಸ್ವಾಮಿ ನೇತೃತ್ವದ ವರದಿ ಅಂಗೀಕಾರಕ್ಕೆ ಸಂಸದ ಗೋವಿಂದ ಕಾರಜೋಳ ಆಗ್ರಹ
4. ಬೆಂಗಳೂರಿಗೆ ಜರ್ಮನಿ ವಿದೇಶಾಂಗ ಸಚಿವ ಜೋಹಾನ್ ವಾಡೆಫುಲ್ ಆಗಮನ

**************

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಮೈಸೂರಿನ ಅಂಬಾವಿಲಾಸ ಅರಮನೆಗೆ ಭೇಟಿ ನೀಡಿದ ನಂತರ ಮೈಸೂರಿನಿಂದ ನಿರ್ಗಮಿಸಿದ್ದಾರೆ. ಎರಡು ದಿನಗಳ ಕಾಲ ಮೈಸೂರು ಪ್ರವಾಸ ಕೈಗೊಂಡಿದ್ದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಬೆಳಗ್ಗೆ ಮೈಸೂರಿನ ಅಂಬಾವಿಲಾಸ ಅರಮನೆಗೆ ಭೇಟಿ ನೀಡಿದರು. ರಾಜವಂಶಸ್ಥರಾದ ಪ್ರಮೋದ ದೇವಿ ಒಡೆಯರ್ ಅವರಿಂದ ಆತಿಥ್ಯ ಸ್ವೀಕರಿಸಿ, ಬೆಳಗಿನ ಉಪಹಾರ ಸೇವಿಸಿ, ಅರಮನೆ ವೀಕ್ಷಿಸಿದರು.ಬಳಿಕ ಅರಮನೆಯಿಂದ ನೇರವಾಗಿ ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಅವರನ್ನು ರಾಜ್ಯಪಾಲ ಥಾವರ್‌ಚಂದ್ ಗೆಹಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ ಬೀಳ್ಕೊಟ್ಟರು.

**************

ಧರ್ಮಸ್ಥಳಕ್ಕೆ ಬಿಜೆಪಿ ಕೈಗೊಂಡಿರುವುದು ಧರ್ಮ ಯಾತ್ರೆಯಲ್ಲ, ರಾಜಕೀಯ ಯಾತ್ರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ದೂರಿದ್ದಾರೆ. ಮೈಸೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ಎಸ್‌ಐಟಿ ತನಿಖೆ ನಡೆಯುತ್ತಿದೆ. ಬಿಜೆಪಿ ಈಗ ಎನ್‌ಐಎ ತನಿಖೆಗೆ ಒತ್ತಾಯಿಸುತ್ತಿದ್ದಾರೆ. ಹಾಗಾದರೆ ರಾಜ್ಯ ಪೊಲೀಸರ ಮೇಲೆ ಬಿಜೆಪಿಯವರಿಗೆ ನಂಬಿಕೆ ಇಲ್ಲವೇ ಎಂದು ಪ್ರಶ್ನಿಸಿದ್ದಾರೆ. ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರೇ ಸ್ವತಃ ಸತ್ಯ ಹೊರಬರಲಿ ಎಂದು ಎಸ್‌ಐಟಿ ರಚನೆಯನ್ನು ಸ್ವಾಗತಿಸಿದ್ದಾರೆ. ತಮ್ಮ

ಮೇಲಿನ ಅನುಮಾನದ ತೂಗುಗತ್ತಿ ನಿವಾರಣೆಯಾಗಬೇಕು ಎಂದಿದ್ದಾರೆ. ಎಸ್‌ಐಟಿ ತನಿಖೆ ಸ್ವತಂತ್ರವಾಗಿ ನಡೆಯುತ್ತಿದ್ದು, ರಾಜ್ಯ ಸರ್ಕಾರ ಅದರಲ್ಲಿ ಹಸ್ತಕ್ಷೇಪ ಮಾಡಿಲ್ಲ. ಸತ್ಯ ಹೊರಬರಬೇಕು ಎಂದರು. ಸೌಜನ್ಯ ಪ್ರಕರಣದ ಮರು ತನಿಖೆ ಅಗತ್ಯವಿದ್ದರೆ ಅವರ ಕುಟುಂಬದವರು ನ್ಯಾಯಾಲಯಕ್ಕೆ ಹೋಗಲಿ. ಈ ಬಗ್ಗೆ ಸೌಜನ್ಯ ತಾಯಿ ಅಂತಿಮ ತೀರ್ಮಾನ ತೆಗೆದುಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

***ಧ್ವನಿ ***ಮುಖ್ಯಮಂತ್ರಿ

**************

ರಾಜ್ಯ ಸಚಿವ ಸಂಪುಟದ ಸಭೆ ಇದೇ ೪ರಂದು ನಡೆಯಲಿದೆ. ಆ ಸಂದರ್ಭದಲ್ಲಿ ನಾಗಮೋಹನ್‌ದಾಸ್ ವರದಿ ಅಥವಾ ಮಾಧುಸ್ವಾಮಿಯವರ ನೇತೃತ್ವದ ವರದಿಯನ್ನು ಒಪ್ಪಿ ಎಲ್ಲರಿಗೂ ಸಾಮಾಜಿಕ ನ್ಯಾಯ ಒದಗಿಸಬೇಕು ಎಂದು ಸಂಸದ ಗೋವಿಂದ ಕಾರಜೋಳ, ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ.ಬಿಜೆಪಿ ರಾಜ್ಯ ಕಾರ್ಯಾಲಯ ಬೆಂಗಳೂರಿನ ಜಗನ್ನಾಥ ಭವನದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಲೆಮಾರಿ ಗುಂಪುಗಳಿಗೆ ಅನ್ಯಾಯವಾಗಿದೆ. ಸಮಾನರು-ಅಸಮಾನರನ್ನು ಒಂದೇ ಪ್ರವರ್ಗದಲ್ಲಿ ತರಬಾರದೆಂಬ ಸುಪ್ರೀಂ ಕೋರ್ಟಿನ ಸೂಚನೆಯನ್ನು ಕೂಡ ಪಾಲಿಸಿಲ್ಲ. ನಾಗಮೋಹನ್‌ದಾಸ್ ಅವರ ವರದಿಯನ್ನೂ ಪರಿಗಣಿಸಿಲ್ಲ. ಇಲ್ಲಿ ರಾಜಕೀಯ ತೇಪೆ ಹಚ್ಚುವ ವರ್ಗೀಕರಣ ಮಾಡಲಾಗಿದೆ ಎಂದು ಆರೋಪಿಸಿದರು. ಮಾಜಿ ಸಚಿವ ಎ.ನಾರಾಯಣಸ್ವಾಮಿ ಮಾತನಾಡಿ, ಒಳ ಮೀಸಲಾತಿ ಜಾರಿಯಿಂದ ಮಾದಿಗ ಸಮುದಾಯದ ಮೂರೂವರೆ ದಶಕಗಳ ಹೋರಾಟಕ್ಕೆ ನ್ಯಾಯ ಸಿಗಲಿದೆ ಎಂದು ಭಾವಿಸಲಾಗಿತ್ತು. ಆದರೆ, ಮಾದಿಗರ ಕನಸು, ಹೋರಾಟಕ್ಕೆ ಮಂಕುಬೂದಿ ಎರಚಲಾಗಿದೆ. ಅಲೆಮಾರಿಗಳನ್ನು ಸ್ಪೃಶ್ಯ ಜನಾಂಗದ ಜೊತೆ ಸೇರಿಸಿ, ಅಲೆಮಾರಿಗಳಿಗೆ ದ್ರೋಹ ಎಸಗಲಾಗಿದೆ ಎಂದು ದೂರಿದರು.

**************

ಕ್ರೀಡಾಪಟುಗಳನ್ನು ಉತ್ತೇಜಿಸಲು ರಾಜ್ಯ ಸರ್ಕಾರ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ಎಂದು ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ಹೇಳಿದ್ದಾರೆ. ದಾವಣಗೆರೆ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ರಾಜ್ಯ ಮತ್ತು ರಾಷ್ಟ್ರಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸುವ ಮಕ್ಕಳಿಗೆ ಕ್ರೀಡಾ ಕೋಟಾದಲ್ಲಿ ಸರ್ಕಾರದಿಂದ ಹಲವು ಸೌಲಭ್ಯಗಳನ್ನು ನೀಡಲಾಗುತ್ತಿದೆ ಎಂದರು. ಹರಿಹರ ಶಾಸಕ ಬಿ.ಪಿ.ಹರೀಶ್ ಮಾತನಾಡಿ, ಕ್ರೀಡೆಗಳಲ್ಲಿ ಭಾಗವಹಿಸುವುದರಿಂದ ವಿದ್ಯಾರ್ಥಿಗಳಿಗೆ ಆತ್ಮಸ್ಥೈರ್ಯ

ಮತ್ತು ಸಾಧಿಸುವ ಛಲ ಬರುತ್ತದೆ ಎಂದು ಹೇಳಿದರು. ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನೇಶ್ ಕೆ.ಶೆಟ್ಟಿ ಉಪಸ್ಥಿತರಿದ್ದರು.

**************

ಯಾದಗಿರಿ ಜಿಲ್ಲೆಯ ಗುರುಮಠಕಲ್ ಪಟ್ಟಣದ ಹೊರವಲಯದಲ್ಲಿ ಕ್ರೀಡಾ ಇಲಾಖೆ ಜಮೀನು ನೀಡಿದರೆ, ಸರ್ಕಾರದ ಹಂತದಲ್ಲಿ ಅನುದಾನವನ್ನು ತರುವ ಮೂಲಕ ತಾಲೂಕು ಕ್ರೀಡಾಂಗಣ ನಿರ್ಮಾಣಕ್ಕೆ ಸಿದ್ಧ ಎಂದು ಗುರುಮಠಕಲ್ ಶಾಸಕ ಶರಣಗೌಡ ಕಂದಕೂರ್ ಭರವಸೆ ನೀಡಿದ್ದಾರೆ. ಯಾದಗಿರಿ ಜಿಲ್ಲೆಯ ಗುರುಮಠಕಲ್ ಪಟ್ಟಣದ ಜವಹಾರಲಾಲ್ ನೆಹರೂ ಕ್ರೀಡಾಂಗಣದಲ್ಲಿ ಕ್ರೀಡಾ ಇಲಾಖೆಯಿಂದ ಆಯೋಜಿಸಿದ್ದ ತಾಲೂಕು ಮಟ್ಟದ ದಸರಾ ಕ್ರೀಡಾಕೂಟದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಐದು ಎಕರೆ ಜಮೀನು ದೊರೆತರೆ ಹೈಟೆಕ್ ಕ್ರೀಡಾಂಗಣ ನಿರ್ಮಿಸಲಾಗುವುದು. ಈ ಭಾಗದಲ್ಲಿ ಕ್ರೀಡಾ ಪ್ರತಿಭೆಗಳಿದ್ದಾರೆ. ಅಂತಹ ಆಸಕ್ತರಿಗೆ ಅವಶ್ಯಕ ಸೌವಲತ್ತುಗಳು ಸಿಗುವಂತಾಗಬೇಕು ಎಂದು ಹೇಳಿದರು.

**************

ಭಾರತ-ಜರ್ಮನ್ ಸಂಬಂಧಗಳ ಹೆಚ್ಚುತ್ತಿರುವ ಕಾರ್ಯತಂತ್ರದ ಮಹತ್ವವನ್ನು  ಜರ್ಮನ್ ವಿದೇಶಾಂಗ ಸಚಿವ ಜೋಹಾನ್ ವಾಡೆಫುಲ್ ಒತ್ತಿಹೇಳಿದ್ದಾರೆ. ಎರಡು ದಿನಗಳ ಪ್ರವಾಸಕ್ಕಾಗಿ ಬೆಂಗಳೂರಿಗೆ ಆಗಮಿಸಿರುವ ಅವರು, ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋ ಪ್ರಧಾನ ಕಚೇರಿಗೆ ಭೇಟಿ ನೀಡಲಿದ್ದಾರೆ.ಇದಕ್ಕೂ ಮುನ್ನ ಮಾತನಾಡಿದ ಅವರು, ಎರಡು ಪ್ರಜಾಪ್ರಭುತ್ವಗಳ ರಾಷ್ಟ್ರಗಳು  ಬಲವಾದ ದ್ವಿಪಕ್ಷೀಯ ಸಂಬಂಧ ಹೊಂದಿವೆ ಎಂದು ಹೇಳಿದರು. ಭಾರತವನ್ನು ಇಂಡೋ-ಪೆಸಿಫಿಕ್‌ನಲ್ಲಿ ಪ್ರಮುಖ ಪಾಲುದಾರ ಎಂದು ಬಣ್ಣಿಸಿದ ವಾಡೆಫುಲ್, ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಸಹಕಾರದ ಮಹತ್ವವನ್ನು ಪ್ರಸ್ತಾಪಿಸಿದರು. ಇದು ಜೋಹಾನ್ ವಾಡೆಫುಲ್ ಅವರ ಮೊದಲ ಭಾರತ ಭೇಟಿಯಾಗಿದೆ.

**************

ಉತ್ತರಕನ್ನಡ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಧರ್ತಿ ಆಬಾ ಜನಜಾತೀಯ ಗ್ರಾಮ ಉತ್ಕರ್ಷ ಅಭಿಯಾನದಡಿ ಜಿಲ್ಲೆಯ ಕಾರವಾರದಲ್ಲಿ ಆದಿ ಕರ್ಮಯೋಗಿ ಅಭಿಯಾನದಡಿ Block Master Trainers ಗಳಿಗೆ ತರಬೇತಿ ಕಾರ್ಯಾಗಾರ ಆಯೋಜಿಸಲಾಗಿತ್ತು.ಕಾರ್ಯಗಾರಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ

ಕಾರ್ಯನಿರ್ವಾಹಕ ಅಧಿಕಾರಿ ಡಾ.ದಿಲೀಷ್ ಶಶಿ ಚಾಲನೆ ನೀಡಿದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಕುಮಾರ ಮಾತನಾಡಿ, ಆದಿವಾಸಿ ಜನರಲ್ಲಿರುವ ಮನೋಧೋರಣೆಯನ್ನು ಬದಲಾಯಿಸಿ, ಅವರಿಗೆ ಗುಣಮಟ್ಟ ಸೇವೆಗಳನ್ನು ಎಲ್ಲ ಇಲಾಖೆಯ ಅಧಿಕಾರಿಗಳು ಒದಗಿಸಬೇಕೆಂಬುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು.

**************

ನಶೆ ಮುಕ್ತ ಭಾರತ ಅಭಿಯಾನದಡಿ ಮಾದಕ ವಸ್ತು ಸೇವನೆ ಮಾಡದಿರಲು ಪ್ರತಿಜ್ಞಾವಿಧಿ ಸ್ವೀಕಾರ ಹಾಗೂ ಅರಿವು ಕಾರ್ಯಕ್ರಮವನ್ನು ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ಕೆ.ಆರ್.ಸಾಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ಕೆ.ಆರ್.ಸಾಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಲಾಗಿತ್ತು. ಈ ವೇಳೆ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ.ಬೆನ್ನೂರ್ ಮಾತನಾಡಿ, ಯುವಕರು, ಸಾರ್ವಜನಿಕರು ಮಾದಕ ವಸ್ತು ವ್ಯಸನಕ್ಕೆ ಬಲಿಯಾಗಬಾರದು. ಮಾದಕ ವಸ್ತುಗಳಾದ ಗಾಂಜಾ, ಅಫೀಮು, ನಾರ್ಕೋಟಿಕ್ ಡ್ರಗ್, ತಂಬಾಕು ಮತ್ತು ನಶೆ ಉಂಟುಮಾಡುವ ವಸ್ತುಗಳಿಂದ ಯುವಕರು ಹಾಗೂ ಸಾರ್ವಜನಿಕರು ದೂರ ಇರಬೇಕು. ಯಾವುದೇ ನಶೆ ಬರುವ ವಸ್ತುಗಳು ಆರೋಗ್ಯಕ್ಕೆ ಹಾನಿಕರವಾಗಿದ್ದು, ದೇಶವನ್ನು ವ್ಯಸನ ಮುಕ್ತ ಭಾರತವನ್ನಾಗಿಸಲು ಪ್ರತಿಯೊಬ್ಬರೂ ಪಣ ತೊಡಬೇಕು ಎಂದು ಕರೆ ನೀಡಿದರು.

**************

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಕುರಿತು ಸಮೀಕ್ಷೆ ಕೈಗೊಳ್ಳಲು ಈಗಾಗಲೇ ಜಿಲ್ಲೆಯಲ್ಲಿ ಮೊದಲನೆ ಹಂತವಾಗಿ ಜಿಯೋ ಟ್ಯಾಗಿಂಗ್ ಕಾರ್ಯ ಪ್ರಗತಿಯಲ್ಲಿದ್ದು, ಎರಡನೇ ಹಂತದಲ್ಲಿ ಇದೇ ೨೦ ರಿಂದ ಅಕ್ಟೋಬರ್ ೭ ರವರೆಗೆ ಸಮೀಕ್ಷಾ ಕಾರ್ಯ ನಡೆಯಲಿದೆ. ಸರ್ವೇ ಕಾರ್ಯಕ್ಕೆ ಗಣತಿದಾರರನ್ನು ನೇಮಿಸಿ ಪಟ್ಟಿಯನ್ನು ಅಂತಿಮಗೊಳಿಸುವಂತೆ ಜಿಲ್ಲಾಧಿಕಾರಿ ಡಾ. ಎಂ.ಆರ್.ರವಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಜಿಲ್ಲೆಯಲ್ಲಿ ಇಂಧನ ಇಲಾಖೆಯಿಂದ ಈಗಾಗಲೇ ಮನೆಗಳಿಗೆ ಜಿಯೋ ಟ್ಯಾಗ್ ಮಾಡಿ, ಸ್ಟಿಕರ್ ಅಂಟಿಸಿ, ೧೫೦ ಮನೆಗಳಿಗೆ ಒಂದು ಬ್ಲಾಕ್ ಗುರುತಿಸಿ, ರೂಟ್ ಮ್ಯಾಪ್ ಹಾಗೂ ಬ್ಲಾಕ್ ಮ್ಯಾಪ್ ಮಾಡುವ ಕಾರ್ಯ ಆರಂಭಿಸಲಾಗಿದ್ದು, ಒಂದು ವಾರದೊಳಗೆ ಟ್ಯಾಗಿಂಗ್ ಕಾರ್ಯ ಪೂರ್ಣಗೊಳಿಸುವಂತೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶಿಸಿದರು. ಜಿಲ್ಲೆಯಲ್ಲಿರುವ ೩ ಲಕ್ಷದ ೩೩ ಸಾವಿರದ

ಇಳಲ ಕುಟುಂಬಗಳ ಮನೆಗಳ ಆರ್‌ಆರ್ ನಂಬರ್‌ಗಳಿಗೆ ಜಿಯೋ ಟ್ಯಾಗಿಂಗ್ ಮಾಡುವ ಮೂಲಕ ಶೇಕಡಾ ನೂರರಷ್ಟು ಪ್ರಗತಿ ಸಾಧಿಸಬೇಕು.

**************

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ರಾಜ್ಯದ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಸಮೀಕ್ಷಾ ಕಾರ್ಯವನ್ನು ಶೀಘ್ರದಲ್ಲೇ ಪ್ರಾರಂಭಿಸಲಾಗುತ್ತಿದ್ದು, ಈ ಕಾರ್ಯಕ್ಕೆ ಜಿಲ್ಲೆಯ ಸಾರ್ವಜನಿಕರು ಸಹಕರಿಸುವಂತೆ ಉತ್ತರ ಕನ್ನಡ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಮನವಿ ಮಾಡಿದ್ದಾರೆ. ಸಮೀಕ್ಷೆಯ ಪೂರ್ವದಲ್ಲಿ ಸರ್ಕಾರದ ಆದೇಶದಂತೆ ಜಿಲ್ಲೆಯಲ್ಲಿ ಇಂಧನ ಇಲಾಖೆಯ ವಿದ್ಯುತಶಕ್ತಿ ಮೀಟರ್ ರೀಡರಗಳಿಂದ ಮನೆಗಳ ಪಟ್ಟಿಯನ್ನು ಸಿದ್ಧಪಡಿಸುವ ಕಾರ್ಯ ಈಗಾಗಲೇ ಪ್ರಾರಂಭವಾಗಿದೆ. ಮೀಟರ್ ರೀಡರ್‌ಗಳು ಮನೆಗಳನ್ನು ಪಟ್ಟಿ ಮಾಡಿ, ಮನೆಗಳಿಗೆ ಸ್ಟಿಕರ್ ಅಂಟಿಸುತ್ತಿದ್ದು, ಇದಕ್ಕೆ ಸಹಕರಿಸುವಂತೆ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

**************